# ಕನ್ನಡ ವಿಶ್ವವಿದ್ಯಾಲಯ, ಹಂಪಿ
## ವಿದ್ಯಾರಣ್ಯ-೫೮೩ ೨೭೬

## ಏಪ್ರಿಲ್ ೦೮, ೨೦೨೧ರ ಗುರುವಾರದಂದು ನಡೆದ ಕಾರ್ಯಕಾರಿ ಸಮಿತಿ ೨೦೭ನೇ(ವಿಶೇಷ) ಸಭೆಯ ನಡವಳಿಗಳು

**ಸಭೆಯಲ್ಲಿ ಉಪಸ್ಥಿತರಿದ್ದವರು:**

| | |
|---|---|
| ೦೧. ಡಾ. ಸ.ಚಿ.ರಮೇಶ, ಮಾನ್ಯ ಕುಲಪತಿಗಳು, ಕ.ವಿ.ಹಂ. | : ಅಧ್ಯಕ್ಷರು |
| ೦೨. ಪ್ರೊ. ಹೆಚ್.ಎಸ್. ರಘುನಾಥ, ಶಿವಮೊಗ್ಗ | : ಸದಸ್ಯರು |
| ೦೩. ಪ್ರೊ. ಜಿ.ಸಿ. ರಾಜಣ್ಣ, ಮೈಸೂರು | : ಸದಸ್ಯರು |
| ೦೪. ಶ್ರೀಮತಿ ನಯನಾ ಎಸ್., ಬೆಂಗಳೂರು | : ಸದಸ್ಯರು |
| ೦೫. ಶ್ರೀ ಜೈಭೀಮ್ ಆರ್.ಕಟ್ಟಿ, ಕಲಬುರಗಿ | : ಸದಸ್ಯರು |
| ೦೬. ಡಾ. ಓ. ಓಬಯ್ಯ | : ಸದಸ್ಯರು |
| ೦೭. ಶ್ರೀ ಸಮಿಉಲ್ಲಾ ಖಾನ್, ಬೆಂಗಳೂರು | : ಸದಸ್ಯರು |
| ೦೮. ಡಾ. ವೀರೇಶ ಬಡಿಗೇರ, ಡೀನ್, ಭಾಷಾ ನಿಕಾಯ, ಕವಿಹಂ | : ಸದಸ್ಯರು |
| ೦೯. ಡಾ. ಸಿ.ಆರ್. ಗೋವಿಂದರಾಜು, ಡೀನ್, ಸಮಾಜ ವಿಜ್ಞಾನಗಳ ನಿಕಾಯ, ಕವಿಹಂ | : ಸದಸ್ಯರು |
| ೧೦. ಡಾ. ಕೆ.ರವೀಂದ್ರನಾಥ, ಡೀನ್, ಲಲಿತಕಲೆಗಳ ನಿಕಾಯ, ಕವಿಹಂ | : ಸದಸ್ಯರು |
| ೧೧. ಡಾ. ಮಾಧವ ಪೆರಾಜೆ, ವಿಜ್ಞಾನಗಳ ನಿಕಾಯ, ಕವಿಹಂ | : ಸದಸ್ಯರು |
| ೧೨. ಡಾ. ರಮೇಶ ನಾಯಕ, ಹಣಕಾಸು ಅಧಿಕಾರಿಗಳು, ಕವಿಹಂ | : ವಿಶೇಷ ಆಹ್ವಾನಿತರು |
| ೧೩. ಡಾ. ಎ. ಸುಬ್ಬಣ್ಣ ರೈ, ಕುಲಸಚಿವರು, ಕವಿಹಂ | : ಪದನಿಮಿತ್ತ ಕಾರ್ಯದರ್ಶಿ |

**ಸಭೆಯಲ್ಲಿ ಅನುಪಸ್ಥಿತರಿದ್ದವರು:**

| | |
|---|---|
| ೦೧. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು | : ಸದಸ್ಯರು |
| ೦೨. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಹಣಕಾಸು ಇಲಾಖೆ, ಬೆಂಗಳೂರು | : ಸದಸ್ಯರು |
| ೦೩. ಸರ್ಕಾರದ ಕಾರ್ಯದರ್ಶಿಗಳು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು | : ಸದಸ್ಯರು |
| ೦೪. ನಿರ್ದೇಶಕರು, ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯ ನಿರ್ದೇಶನಾಲಯ, ಮೈಸೂರು | : ಸದಸ್ಯರು |
| ೦೫. ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು | : ಸದಸ್ಯರು |
| ೦೬. ಪ್ರೊ. ಹೆಚ್.ಎಂ. ಚನ್ನಪ್ಪಗೋಳ, ಬೆಳಗಾವಿ | : ಸದಸ್ಯರು |
| ೦೭. ಶ್ರೀ ಪ್ರಶಾಂತ್ ಭೀಮಯ್ಯ, ಮಡಿಕೇರಿ | : ಸದಸ್ಯರು |

ಸಭೆಯ ಆರಂಭದಲ್ಲಿ ಕುಲಸಚಿವರು ಕಾರ್ಯಕಾರಿ ಸಮಿತಿ ಸದಸ್ಯರನ್ನು ಮತ್ತು ಅಧ್ಯಕ್ಷರನ್ನು ಸಭೆಗೆ ಸ್ವಾಗತಿಸಿದರು. ಇತ್ತೀಚೆಗೆ ನಿಧನರಾದ ಹಿರಿಯ ಸಾಹಿತಿಗಳಾದ ಡಾ.ಎನ್.ಎಸ್.ಲಕ್ಷ್ಮೀನಾರಾಯಣ ಭಟ್ಟ ಅವರ ಆತ್ಮಕ್ಕೆ ಶಾಂತಿ ಕೋರಿ ಸಭೆ ಸಂತಾಪ ಸೂಚಿಸಿತು. ನೂತನವಾಗಿ ಕಾರ್ಯಕಾರಿ ಸಮಿತಿಗೆ ನಿಯೋಜನೆಗೊಂಡ ಡಾ.ಓ.ಓಬಯ್ಯ ಅವರಿಗೆ ಅಭಿನಂದನೆಗಳನ್ನು ಸಲ್ಲಿಸಿದ ಮಾನ್ಯ ಕುಲಪತಿಗಳು ಈವರೆಗೆ ಕಾರ್ಯಕಾರಿ ಸಮಿತಿ ಸದಸ್ಯರಾಗಿ ಕಾರ್ಯನಿರ್ವಹಿಸಿ ನಿರ್ಗಮಿಸಿದ ಡಾ. ವೈ.ಎಂ. ಭಜಂತ್ರಿ ಅವರಿಗೆ ವಿಶ್ವವಿದ್ಯಾಲಯದ ಪರವಾಗಿ ಕೃತಜ್ಞತೆಗಳನ್ನು ಸಲ್ಲಿಸಿದರು. ವಿಶ್ವವಿದ್ಯಾಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ತಾತ್ಕಾಲಿಕ ಸಿಬ್ಬಂದಿಗಳ ೨೦೨೦-೨೧ನೇ ಸಾಲಿನ ವೇತನ ಅನುದಾನ ಬಿಡುಗಡೆಗೊಳಿಸಿದ ಕರ್ನಾಟಕ ಸರ್ಕಾರದ ಸನ್ಮಾನ್ಯ ಮುಖ್ಯಮಂತ್ರಿಗಳಾದ ಶ್ರೀ ಬಿ.ಎಸ್.ಯಡಿಯೂರಪ್ಪ, ಸನ್ಮಾನ್ಯ ಉಪಮುಖ್ಯಮಂತ್ರಿಗಳಾದ ಡಾ.ಅಶ್ವಥ್ ನಾರಾಯಣ, ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಆನಂದ್‌ಸಿಂಗ್, ಕಾರ್ಯಕಾರಿ ಸಮಿತಿ ಹಾಗೂ ಆಡಳಿತ ಮಂಡಳಿ ಸದಸ್ಯರಿಗೂ ಮತ್ತು ಈ ದಿಸೆಯಲ್ಲಿ ಸಹಕರಿಸಿದ ಎಲ್ಲರಿಗೂ ಮಾನ್ಯ ಕುಲಪತಿಗಳು ಕೃತಜ್ಞತೆಗಳನ್ನು ಸಲ್ಲಿಸಿದರು.

**ಮಂಡಿಸಲಾದ ಕಾರ್ಯಸೂಚಿಯ ಕುರಿತು ಚರ್ಚಿಸಿ ಈ ಕೆಳಕಂಡ ನಿರ್ಣಯಗಳನ್ನು ಕೈಗೊಳ್ಳಲಾಯಿತು.**

**ವಿಷಯ** : ದಿನಾಂಕ ೦೬.೦೨.೨೦೨೧ರಂದು ನಡೆದ ಕಾರ್ಯಕಾರಿ ಸಮಿತಿಯ ೨೦೬ನೇ ಸಭೆಯ ನಡವಳಿಗಳ ಸ್ಥಿರೀಕರಣ ಹಾಗೂ ಅನುಮೋದನೆ ನೀಡುವ ಕುರಿತು. **(ಅನುಬಂಧ-೦೧)**

**ನಿರ್ಣಯ** : ದಿನಾಂಕ ೦೬.೦೨.೨೦೨೧ರಂದು ನಡೆದ ಕಾರ್ಯಕಾರಿ ಸಮಿತಿ ೨೦೬ನೇ ಸಭೆಯ ನಡವಳಿಗಳನ್ನು ಪರಿಶೀಲಿಸಿ ಸ್ಥಿರೀಕರಣಕ್ಕೆ ಸಭೆಯು ಅನುಮೋದನೆ ನೀಡಿತು.

**ವಿಷಯ** : ದಿನಾಂಕ ೦೬.೦೨.೨೦೨೧ರಂದು ನಡೆದ ಕಾರ್ಯಕಾರಿ ಸಮಿತಿಯ ೨೦೬ನೇ ಸಭೆಯ ನಡವಳಿಗಳ ಅನುಪಾಲನಾ ವರದಿಗೆ ಸಭೆಯು ಅನುಮೋದನೆ ನೀಡುವ ಕುರಿತು. **(ಅನುಬಂಧ-೦೨)**

**ನಿರ್ಣಯ** : ದಿನಾಂಕ ೦೬.೦೨.೨೦೨೧ರಂದು ನಡೆದ ಕಾರ್ಯಕಾರಿ ಸಮಿತಿಯ ೨೦೬ನೇ ಸಭೆಯ ನಡವಳಿಗಳ ಅನುಪಾಲನಾ ವರದಿಯನ್ನು ಸಭೆಯು ಪರಿಶೀಲಿಸಿ ಅನುಮೋದನೆ ನೀಡಿತು.

೨೦೭.೦೧ ದಿನಾಂಕ ೦೯.೦೪.೨೦೨೧ರಂದು ನಡೆಯಲಿರುವ ೨೯ನೇ ನುಡಿಹಬ್ಬ(ಘಟಿಕೋತ್ಸವ)ದಲ್ಲಿ ವಿದ್ಯಾರ್ಥಿಗಳು ಪಡೆಯುವ ವಿವಿಧ ಕೋರ್ಸ್‌ಗಳ ಪದವಿಗಳಿಗೆ ಸಭೆಯ ಅನುಮೋದನೆ ಕೋರಿದೆ.

ನಿರ್ಣಯ : ಸದರಿ ವಿಷಯವನ್ನು ಪರಿಶೀಲಿಸಿದ ಸಭೆಯು ಈ ಕೆಳಗಿನ ವಿವಿಧ ಕೋರ್ಸ್‌ಗಳ ಒಟ್ಟು ೩೬೫ ವಿದ್ಯಾರ್ಥಿಗಳಿಗೆ ಸಂಬಂಧಪಟ್ಟ ಪದವಿಗಳನ್ನು ನೀಡಲು ಅನುಮೋದನೆ ನೀಡಿತು.

೧. ಡಿ.ಲಿಟ್–೧೦
೨. ಪಿಎಚ್.ಡಿ.–೧೦೦
೩. ಬಿ. ಮ್ಯೂಜಿಕ್ ಪದವಿ–೦೫
೪. ಎಂ.ಎ.ಪಿಎಚ್.ಡಿ. (ಕನ್ನಡ ಸಾಹಿತ್ಯ) ಸಂಯೋಜಿತ ಪದವಿ–೩೯
೫. ಎಂ.ಎ.ಪಿಎಚ್.ಡಿ. (ಇತಿಹಾಸ ಮತ್ತು ಪುರಾತತ್ವ) ಸಂಯೋಜಿತ ಪದವಿ–೨೨
೬. ಎಂ.ಎ.ಪಿಎಚ್.ಡಿ. (ಮಹಿಳಾ ಅಧ್ಯಯನ) ಸಂಯೋಜಿತ ಪದವಿ–೦೭
೭. ಎಂ.ಎ.ಪಿಎಚ್.ಡಿ. (ಸಮಾಜಶಾಸ್ತ್ರ) ಸಂಯೋಜಿತ ಪದವಿ–೧೦
೮. ಎಂ.ಎ.ಪಿಎಚ್.ಡಿ. (ಗ್ರಾಮೀಣಾಭಿವೃದ್ಧಿ) ಸಂಯೋಜಿತ ಪದವಿ–೧೬
೯. ಎಂ.ವಿ.ಎ. (ಚಿತ್ರಕಲೆ) ಪದವಿ–೧೮
೧೦. ಎಂ. ಮ್ಯೂಜಿಕ್–೦೮
೧೧. ಎಂ.ಎ. ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ–೦೭
೧೨. ನಾಟಕ ಡಿಪ್ಲೊಮಾ–೩೮
೧೩. ಭಾಷಾಂತರ ಸ್ನಾತಕೋತ್ತರ ಡಿಪ್ಲೊಮಾ–೦೫
೧೪. ಪಂಚಾಯತ್‌ರಾಜ್ ಡಿಪ್ಲೊಮಾ–೦೬
೧೫. ಪತ್ರಿಕೋದ್ಯಮ ಸ್ನಾತಕೋತ್ತರ ಡಿಪ್ಲೊಮಾ–೧೧
೧೬. ಪುರಾತತ್ವ, ವಸ್ತುಸಂಗ್ರಹಾಲಯಶಾಸ್ತ್ರ ಮತ್ತು ಪ್ರವಾಸೋದ್ಯಮ ಸ್ನಾತಕೋತ್ತರ ಡಿಪ್ಲೊಮಾ–೧೮
೧೭. ಯೋಗ ಅಧ್ಯಯನ ಸ್ನಾತಕೋತ್ತರ ಡಿಪ್ಲೊಮಾ–೩೭
೧೮. ಯೋಗ ಅಧ್ಯಯನ ಸರ್ಟಿಫಿಕೇಟ್ ಕೋರ್ಸ್–೦೮

೨೦೭.೦೨ ಚಿತ್ರಕಲಾ ವಿದ್ಯಾಲಯಗಳ ನಿರ್ವಹಣ ಕೇಂದ್ರಗಳ ವಿವಿಧ ಪದವಿ ಹಾಗೂ ಡಿಪ್ಲೊಮಾ ಕೋರ್ಸ್‌ಗಳಿಗೆ ಸಭೆ ಅನುಮೋದನೆ ಕೋರಿದೆ.

ನಿರ್ಣಯ : ಸದರಿ ವಿಷಯವನ್ನು ಪರಿಶೀಲಿಸಿದ ಸಭೆಯು ಈ ಕೆಳಗಿನ ವಿವಿಧ ಕೋರ್ಸ್‌ಗಳ ಒಟ್ಟು ೪೧೮ ವಿದ್ಯಾರ್ಥಿಗಳಿಗೆ ಸಂಬಂಧಪಟ್ಟ ಪದವಿಗಳನ್ನು ನೀಡಲು ಅನುಮೋದನೆ ನೀಡಿತು.

೧. ಬ್ಯಾಚುಲರ್ ಆಫ್ ವಿಜ್ಯುವಲ್ ಆರ್ಟ್ಸ್, ಚಿತ್ರಕಲೆ ಅಂತಿಮ – ೨೯೧
೨. ಬ್ಯಾಚುಲರ್ ಆಫ್ ವಿಜ್ಯುವಲ್ ಆರ್ಟ್ಸ್, ಅನ್ವಯಿಕ ಕಲೆ ಅಂತಿಮ – ೩೧
೩. ಬ್ಯಾಚುಲರ್ ಆಫ್ ವಿಜ್ಯುವಲ್ ಆರ್ಟ್ಸ್, ಶಿಲ್ಪಕಲೆ ಅಂತಿಮ – ೫
೪. ನಾಲ್ಕನೇ ವರ್ಷದ ವಿಶೇಷ ಪರಿಣಿತಿ ಡಿಪ್ಲೊಮಾ – ೯೧

೨೦೭.೦೩ ಮಾರ್ಚ್ ೦೧, ೨೦೨೧ರಂದು ನಡೆದ ಡೀನ್ ಸಮಿತಿ ಸಭೆಯ ನಡೆವಳಿಗಳಿಗೆ ಕಾರ್ಯಕಾರಿ ಸಮಿತಿ ಸಭೆಯ ಅನುಮೋದನೆ ಕೋರಿದೆ.

ನಿರ್ಣಯ : ಸದರಿ ನಡೆವಳಿಯನ್ನು ಸಭೆಯು ಪರಿಶೀಲಿಸಿ ಅನುಮೋದನೆ ನೀಡಿತು.

೨೦೭.೦೪ ಮಾರ್ಚ್ ೦೯, ೨೦೨೧ರಂದು ನಡೆದ ಡೀನ್ ಸಮಿತಿ ಸಭೆಯ ನಡೆವಳಿಗಳಿಗೆ ಕಾರ್ಯಕಾರಿ ಸಮಿತಿ ಸಭೆಯ ಅನುಮೋದನೆ ಕೋರಿದೆ.

ನಿರ್ಣಯ : ಸದರಿ ನಡೆವಳಿಯನ್ನು ಸಭೆಯು ಪರಿಶೀಲಿಸಿ ಅನುಮೋದನೆ ನೀಡಿತು.

೨೦೭.೦೫ ಲಿಂಗಸೂಗೂರಿನ ವಿ.ಸಿ.ಬಿ. ಶಿಕ್ಷಣ ಸಂಸ್ಥೆಯ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯಕ್ಕೆ ಕನ್ನಡ ವಿಶ್ವವಿದ್ಯಾಲಯದ ಮಾನ್ಯತಾ ಪರಿಶೀಲನಾ ಸಮಿತಿಯು ದಿನಾಂಕ ೦೫.೧೨.೨೦೨೦ರಂದು ಭೇಟಿ ನೀಡಿ ವರದಿ ನೀಡಿರುವ ಹಿನ್ನೆಲೆಯಲ್ಲಿ ಪಿಎಚ್.ಡಿ. ಕೋರ್ಸ್‌ಗಳ ಅಧ್ಯಯನಕ್ಕೆ ಕನ್ನಡ ವಿಶ್ವವಿದ್ಯಾಲಯದ ಮಾನ್ಯತೆ ನೀಡಲು ಕಾರ್ಯಕಾರಿ ಸಮಿತಿ ಅನುಮೋದನೆ ಕೋರಿದೆ.

ನಿರ್ಣಯ : ಸದರಿ ವರದಿಯನ್ನು ಸಭೆಯು ಪರಿಶೀಲಿಸಿ ಸಂಸ್ಥೆಯು ತಾಂತ್ರಿಕ ಸಮಸ್ಯೆಗಳನ್ನು ಸರಿಪಡಿಸಿಕೊಂಡು, ಸ್ನಾತಕೋತ್ತರ ಕೇಂದ್ರವನ್ನು ಆರಂಭಿಸಿದ ನಂತರ ಕನ್ನಡ ವಿಶ್ವವಿದ್ಯಾಲಯದ ಮಾನ್ಯತೆಯನ್ನು ನೀಡಲು ತೀರ್ಮಾನಿಸಿತು.

೨೦೭.೦೬ ಕಾರ್ಯನಿರತ ಮಹಿಳೆಯರ ಮೇಲಿನ ಲೈಂಗಿಕ ದೌರ್ಜನ್ಯ ತಡೆ, ನಿಷೇಧ, ನಿವಾರಣೆ ಘಟಕಕ್ಕೆ ಬುಡಕಟ್ಟು ಅಧ್ಯಯನ ವಿಭಾಗದ ಪಿಎಚ್.ಡಿ. ವಿದ್ಯಾರ್ಥಿನಿಯಾದ ಕು. ಹೇಮಾವತಿ ಬಿ.ಹೆಚ್. ಇವರು ನೀಡಿರುವ ದೂರಿನ ಕುರಿತು ಸಮಿತಿಯು ತನಿಖೆ ನಡೆಸಿ ದಿನಾಂಕ ೧೫.೦೨.೨೦೨೧ರಂದು ಕುಲಸಚಿವರಿಗೆ ಅಂತಿಮ ವರದಿಯನ್ನು ನೀಡಿದ್ದು, ಸದರಿ ವರದಿಯನ್ನು ಅನುಷ್ಠಾನಗೊಳಿಸಲು ಕಾರ್ಯಕಾರಿ ಸಮಿತಿ ಅನುಮೋದನೆ ಕೋರಿದೆ.

ನಿರ್ಣಯ : ಸದರಿ ವರದಿಯನ್ನು ಕುರಿತು ಸಭೆಯು ಸುದೀರ್ಘವಾಗಿ ಚರ್ಚಿಸಿ ಈ ಕೆಳಗಿನಂತೆ ನಿರ್ಣಯಗಳನ್ನು ಕೈಗೊಳ್ಳಲಾಯಿತು.

೧. ಕಾನೂನು ವ್ಯಾಪ್ತಿಯಲ್ಲಿ ಸೂಕ್ತ ಕ್ರಮಕೈಗೊಳ್ಳುವುದು.

೨. ಪ್ರಕರಣದಲ್ಲಿ ಭಾಗಿಗಳೆನ್ನಲಾದ ನಾಲ್ವರು ವಿದ್ಯಾರ್ಥಿಗಳ ಮೇಲೆ ಸಮಾನವಾಗಿ ಕ್ರಮ ಕೈಗೊಳ್ಳುವುದಕ್ಕೆ ವರದಿಯಲ್ಲಿ ಮಾಡಿರುವ ಶಿಫಾರಸ್ಸನ್ನು ಪುನರ್ ಪರಿಶೀಲಿಸುವಂತೆ ಸಮಿತಿಗೆ ಸೂಚಿಸುವುದು.

೩. ಸಂಬಂಧಪಟ್ಟ ವಿದ್ಯಾರ್ಥಿಗಳ ಪಿಎಚ್.ಡಿ. ಪ್ರಕ್ರಿಯೆಗಳನ್ನು ತಡೆಹಿಡಿಯುವುದಕ್ಕೆ ನಿರ್ದಿಷ್ಟಕಾಲಾವಧಿ ನಿಗದಿಪಡಿಸಲು ಸಮಿತಿಯನ್ನು ಕೋರುವುದು.

ಈ ಮೇಲಿನ ಅಂಶಗಳ ಹಿನ್ನೆಲೆಯಲ್ಲಿ ವರದಿಯನ್ನು ಅನುಷ್ಠಾನಗೊಳಿಸಲು ಸಭೆಯು ಅನುಮೋದನೆ ನೀಡಿತು.

೨೦೭.೦೭ ರಾಷ್ಟ್ರಕವಿ ಕುವೆಂಪು ಸಮಗ್ರ ಸಾಹಿತ್ಯ ಸಂಪುಟಗಳು: ಕೃತಿಚೌರ್ಯ ಆರೋಪ ಕುರಿತು ಸತ್ಯ ಶೋಧನಾ ಸಮಿತಿಯು ದಿನಾಂಕ ೦೫.೦೩.೨೦೨೧ರಂದು ನೀಡಿರುವ ಅಂತಿಮ ವರದಿಗೆ ಕಾರ್ಯಕಾರಿ ಸಮಿತಿ ಸಭೆಯ ಅನುಮೋದನೆ ಕೋರಿದೆ.

ನಿರ್ಣಯ : ೧. ಸದರಿ ವರದಿಯನ್ನು ಸಭೆಯು ಸುದೀರ್ಘವಾಗಿ ಚರ್ಚಿಸಿಅನುಮೋದನೆ ನೀಡಿತು.

೨. ಆರೋಪಕ್ಕೆ ಸಂಬಂಧ ಪಟ್ಟಂತೆ ಕಾನೂನಾತ್ಮಕ ಕ್ರಮಕೈಗೊಳ್ಳಲು ಹಾಗೂ ನಿರ್ದಿಷ್ಟ ಮೊತ್ತದ ಪರಿಹಾರ ಕೋರಿ ಮಾನನಷ್ಟ ಮೊಕದ್ದಮೆ ಹೂಡಲು ಸಭೆಯು ತೀರ್ಮಾನಿಸಿತು.

೨೦೭.೦೮ ಫೆಬ್ರವರಿ ೧೭, ೨೦೨೧ ರಂದು ನಡೆದ ಖರೀದಿ ಸಮಿತಿ ಸಭೆಯ ನಡೆವಳಿಗಳಿಗೆ ಕಾರ್ಯಕಾರಿ ಸಮಿತಿ ಸಭೆಯ ಅನುಮೋದನೆ ಕೋರಿದೆ.

ನಿರ್ಣಯ : ಸದರಿ ನಡೆವಳಿಯನ್ನು ಸಭೆಯು ಪರಿಶೀಲಿಸಿ ಅನುಮೋದನೆ ನೀಡಿತು.

೨೦೭.೦೯ ದಿನಾಂಕ ೨೨.೦೨.೨೦೨೧ರಂದು ನಡೆದ ಪ್ರಸಾರಾಂಗ ಸಲಹಾ ಸಮಿತಿ ಸಭೆಯ ನಡೆವಳಿಗಳಿಗೆ ಕಾರ್ಯಕಾರಿ ಸಮಿತಿ ಸಭೆಯ ಅನುಮೋದನೆ ಕೋರಿದೆ.

ನಿರ್ಣಯ : ಸದರಿ ನಡೆವಳಿಯನ್ನು ಸಭೆಯು ಪರಿಶೀಲಿಸಿ ಅನುಮೋದನೆ ನೀಡಿತು.

೨೦೭.೧೦ ದಿನಾಂಕ ೨೯.೦೩.೨೦೨೧ರಂದು ನಡೆದ ಕನ್ನಡ ವಿಶ್ವವಿದ್ಯಾಲಯದ ಐಕ್ಯುಎಸಿ ಪದಾಧಿಕಾರಿ ಮಂಡಳಿ ಸಭೆ(೪)ರ ನಡೆವಳಿಗಳಿಗೆ ಕಾರ್ಯಕಾರಿ ಸಮಿತಿ ಸಭೆಯ ಅನುಮೋದನೆ ಕೋರಿದೆ.

ನಿರ್ಣಯ : ಸದರಿ ನಡೆವಳಿಯನ್ನು ಸಭೆಯು ಪರಿಶೀಲಿಸಿ ಅನುಮೋದನೆ ನೀಡಿತು.

ಅಧ್ಯಕ್ಷರ ಅಪ್ಪಣೆ ಮೇರೆಗೆ ಇತರೆ ವಿಷಯಗಳು

೨೦೭.೧೧ ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ ನಿರ್ದೇಶನದ ಹಿನ್ನೆಲೆಯಲ್ಲಿ ಕನ್ನಡ ವಿಶ್ವವಿದ್ಯಾಲಯದ ವಸ್ತುಸಂಗ್ರಹಾಲಯ ಮತ್ತು ಪ್ರವಾಸೋದ್ಯಮ ಸಂಶೋಧನಾ ಕೇಂದ್ರದಲ್ಲಿ ನೂತನವಾಗಿ ಪ್ರವಾಸೋದ್ಯಮ ಸ್ನಾತಕೋತ್ತರ ಪದವಿ ಕೋರ್ಸನ್ನು ಆರಂಭಿಸಲು ಕಾರ್ಯಕಾರಿ ಸಮಿತಿ ಸಭೆಯ ಅನುಮೋದನೆ ಕೋರಿದೆ.

ನಿರ್ಣಯ : ಸದರಿ ವಿಷಯವನ್ನು ಸಭೆಯು ಪರಿಶೀಲಿಸಿ, ಕನ್ನಡ ವಿಶ್ವವಿದ್ಯಾಲಯದ ವಸ್ತುಸಂಗ್ರಹಾಲಯ ಮತ್ತು ಪ್ರವಾಸೋದ್ಯಮ ಸಂಶೋಧನಾ ಕೇಂದ್ರದಲ್ಲಿ ನೂತನವಾಗಿ ಪ್ರವಾಸೋದ್ಯಮ ಸ್ನಾತಕೋತ್ತರ ಪದವಿ ಕೋರ್ಸನ್ನು ಆರಂಭಿಸಲು ಅನುಮೋದನೆ ನೀಡಿತು.

೨೦೭.೧೨ ಏಪ್ರಿಲ್ ೦೨, ೨೦೨೧ರಂದು ನಡೆದ ಡೀನ್ ಸಮಿತಿ ಸಭೆ ನಡೆವಳಿಗಳಿಗೆ ಕಾರ್ಯಕಾರಿ ಸಮಿತಿ ಸಭೆಯ ಅನುಮೋದನೆ ಕೋರಿದೆ.

ನಿರ್ಣಯ : ಸದರಿ ನಡೆವಳಿಯನ್ನು ಸಭೆಯು ಪರಿಶೀಲಿಸಿ ಅನುಮೋದನೆ ನೀಡಿತು.

೨೦೭.೧೩ ಕನ್ನಡ ವಿಶ್ವವಿದ್ಯಾಲಯದ ಬೋಧಕ ಸಿಬ್ಬಂದಿಗಳ ೭ನೇ ಪರಿಷ್ಕೃತ ಯುಜಿಸಿ ವೇತನ ಜಾರಿಗೊಳಿಸುವ ಅನುಶಾಸನಕ್ಕೆ ಕಾರ್ಯಕಾರಿ ಸಮಿತಿ ಸಭೆಯ ಘಟನೋತ್ತರ ಅನುಮೋದನೆ ಕೋರಿದೆ.

ನಿರ್ಣಯ : ಈ ಕುರಿತು ಸಭೆಯು ಪರಿಶೀಲಿಸಿ, ಕನ್ನಡ ವಿಶ್ವವಿದ್ಯಾಲಯದ ಬೋಧಕ ಸಿಬ್ಬಂದಿಗಳ ೭ನೇ ಪರಿಷ್ಕೃತ ಯುಜಿಸಿ ವೇತನ ಜಾರಿಗೊಳಿಸುವ ಅನುಶಾಸನಕ್ಕೆ ಅನುಮೋದನೆ ನೀಡಿತು.

೨೦೭.೧೪ ಕನ್ನಡ ವಿಶ್ವವಿದ್ಯಾಲಯದ ಪ್ರಸಾರಾಂಗದ ಎಲ್ಲಾ ಪ್ರಕಟಣೆಗಳನ್ನು "ಇ-ಜ್ಞಾನವಾಹಿನಿ" ಎಂಬ ಡಿಜಿಟಲ್ ತಂತ್ರಜ್ಞಾನಕ್ಕೆ ಅಳವಡಿಸುವ ಪ್ರಸ್ತಾವಕ್ಕೆ ಕಾರ್ಯಕಾರಿ ಸಮಿತಿ ಸಭೆಯ ಅನುಮೋದನೆ ಕೋರಿದೆ.

ನಿರ್ಣಯ : ಸದರಿ ಪ್ರಸ್ತಾವನೆಯನ್ನು ಸಭೆಯು ಪರಿಶೀಲಿಸಿ ನಿಯಮಾನುಸಾರ ಕ್ರಮಕೈಗೊಳ್ಳಲು ಅನುಮೋದನೆ ನೀಡಿತು.

೨೦೭.೧೫ ಫೆಬ್ರವರಿ ೧೭, ೨೦೨೧ರಂದು ನಡೆದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ವಿಶೇಷ ಘಟಕದ ಸಲಹಾ ಸಮಿತಿ ಸಭೆ ನಡೆವಳಿಗಳಿಗೆ ಕಾರ್ಯಕಾರಿ ಸಮಿತಿ ಸಭೆಯ ಅನುಮೋದನೆ ಕೋರಿದೆ.

ನಿರ್ಣಯ : ಸದರಿ ನಡೆವಳಿಯನ್ನು ಸಭೆಯು ಪರಿಶೀಲಿಸಿ ಅನುಮೋದನೆ ನೀಡಿತು.

೨೦೭.೧೬ ದಿನಾಂಕ ೦೩.೦೪.೨೦೨೧ರಂದು ಡಾ. ಚಲುವರಾಜು, ಪ್ರಾಧ್ಯಾಪಕರು, ಬುಡಕಟ್ಟು ಅಧ್ಯಯನ ವಿಭಾಗ, ಇವರು ಸೆಬಾಟಿಕಲ್ ರಜೆ ಕೋರಿ ಸಲ್ಲಿಸಿರುವ ಮನವಿ ಕುರಿತು.

ನಿರ್ಣಯ : ಸದರಿ ವಿಷಯ ಕುರಿತು ಚರ್ಚಿಸಿದ ಸಮಿತಿಯು ಈ ಸಂಬಂಧ ಪೂರಕ ದಾಖಲೆಗಳೊಂದಿಗೆ ಮುಂದಿನ ಸಭೆಯಲ್ಲಿ ಮಂಡಿಸಲು ತೀರ್ಮಾನಿಸಿತು.

೨೦೭.೧೭ ಶ್ರೀ ಸದ್ಗುರು ಬಸವರೂಢ ಮಹಾಸ್ವಾಮಿ ಕಲಾ ಮತ್ತು ವಾಣಿಜ್ಯ ಪದವಿ (ಎಸ್.ಎಸ್.ಬಿ.ಎಂ.) ಕಾಲೇಜು, ಹೂವಿನ ಹಿಪ್ಪರಗಿ ಕೇಂದ್ರಕ್ಕೆ ಕನ್ನಡ ವಿಶ್ವವಿದ್ಯಾಲಯದ ಮಾನ್ಯತಾ ಪರಿಶೀಲನಾ ಸಮಿತಿಯು ದಿನಾಂಕ ೨೭.೦೩.೨೦೨೧ರಂದು ಭೇಟಿ ನೀಡಿ ವರದಿ ನೀಡಿರುವ ಹಿನ್ನೆಲೆಯಂತೆ ಕನ್ನಡ ವಿಶ್ವವಿದ್ಯಾಲಯದ ಮಾನ್ಯತೆ ನೀಡಲು ಕಾರ್ಯಕಾರಿ ಸಮಿತಿ ಸಭೆಯ ಅನುಮೋದನೆ ಕೋರಿದೆ.

ನಿರ್ಣಯ : ಸದರಿ ವರದಿಯನ್ನು ಪರಿಶೀಲಿಸಿದ ಸಮಿತಿಯು ಸದ್ಯದ ಮಟ್ಟಿಗೆ ಸಂಸ್ಥೆಯು ಅಪೇಕ್ಷಿಸಿದ ಡಿಪ್ಲೊಮಾ ಕೋರ್ಸ್‌ಗಳನ್ನು ಆರಂಭಿಸಲು ಅನುಮೋದನೆ ನೀಡಬಹುದೆಂದೂ, ಸಂಶೋಧನ ಕೇಂದ್ರಕ್ಕೆ ಅವಶ್ಯವಿರುವ ಅರ್ಹತೆನ್ನು ಪೂರೈಸಿಕೊಂಡ ನಂತರ ಪಿಎಚ್.ಡಿ. ಕೋರ್ಸ್‌ಗೆ ಮಾನ್ಯತೆ ನೀಡಬಹುದೆಂದೂ ತೀರ್ಮಾನಿಸಿತು.

೨೦೭.೧೮ ಕನ್ನಡ ವಿಶ್ವವಿದ್ಯಾಲಯದಲ್ಲಿ ತಾತ್ಕಾಲಿಕವಾಗಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಮತ್ತು ಬೋಧಕೇತರ (ಒಟ್ಟು ೧೭೫) ಸಿಬ್ಬಂದಿಗಳ ಹುದ್ದೆಗಳ ಹಾಗೂ ಆ ಹುದ್ದೆಗಳ ಸಂಬಂಧ ವೇತನಾನುದಾನದ ಮಂಜೂರಾತಿಗಾಗಿ ಸ್ಥಳೀಯ ಸಮಿತಿಯು ಸಿದ್ಧಪಡಿಸಿದ ಪ್ರಸ್ತಾವವನ್ನು ಸರ್ಕಾರಕ್ಕೆ ಸಲ್ಲಿಸಲು ಕಾರ್ಯಕಾರಿ ಸಮಿತಿಯ ಅನುಮೋದನೆ ಕೋರಿದೆ.

ನಿರ್ಣಯ : ಈ ಸಂಬಂಧ ಸಭೆಯು ಪರಿಶೀಲಿಸಿ, ಸಿದ್ಧಪಡಿಸಲಾದ ಪ್ರಸ್ತಾವವನ್ನು ಸರ್ಕಾರದ ಮಂಜೂರಾತಿಗೆ ಸಲ್ಲಿಸಲು ಅನುಮೋದನೆ ನೀಡಿತು.

೨೦೭.೧೯ ವಿಶ್ವವಿದ್ಯಾಲಯದಲ್ಲಿ ಖಾಲಿ ಇರುವ ಪಿಎಚ್.ಡಿ. ಸ್ಥಾನಗಳ ಪ್ರವೇಶಕ್ಕೆ ಕ್ರಮವಹಿಸುವ ಬಗ್ಗೆ.

ನಿರ್ಣಯ : ಈ ಸಂಬಂಧ ಸಭೆಯು ಸುದೀರ್ಘವಾಗಿ ಚರ್ಚಿಸಿ ಪ್ರಸ್ತುತ ಶೈಕ್ಷಣಿಕ ವರ್ಷದಿಂದ ಕನ್ನಡ ವಿಶ್ವವಿದ್ಯಾಲಯದಲ್ಲಿ ಖಾಲಿ ಇರುವ ಪಿಎಚ್.ಡಿ. ಸ್ಥಾನಗಳ ಪ್ರವೇಶಕ್ಕೆ ನಿಯಮಾನುಸಾರ ಕ್ರಮಕೈಗೊಳ್ಳಲು ಸಭೆ ತೀರ್ಮಾನಿಸಿತು.

ಹಾಗೂ ಮಾರ್ಗದರ್ಶಕರ ಕೊರತೆ ಉಂಟಾದಲ್ಲಿ ಬಾಹ್ಯ ಮಾರ್ಗದರ್ಶಕರ ನಿಯೋಜನೆ ಸಂಬಂಧ ಸೂಕ್ತ ಪ್ರಸ್ತಾವನೆಯನ್ನು ಸಿದ್ಧಪಡಿಸಿ ಸರ್ಕಾರದ ಮತ್ತು ಯು.ಜಿ.ಸಿ.ಯ ಅನುಮೋದನೆಗಾಗಿ ಸಲ್ಲಿಸಲು ಸಭೆ ತೀರ್ಮಾನಿಸಿತು.

೨೦೭.೨೦ ಕನ್ನಡ ವಿಶ್ವವಿದ್ಯಾಲಯದ ದೂರಶಿಕ್ಷಣ ನಿರ್ದೇಶನಾಲಯದ ಮೂಲಕ ನಡೆಸುವ ಎಲ್ಲಾ ಕೋರ್ಸ್‌ಗಳನ್ನು ಮುಂದುವರಿಸುವ ಬಗ್ಗೆ.

ನಿರ್ಣಯ : ಈ ಕುರಿತು ಸಭೆಯು ಚರ್ಚಿಸಿ ಪ್ರಸ್ತುತ ಇರುವಂತೆಯೇ ಕನ್ನಡ ವಿಶ್ವವಿದ್ಯಾಲಯದ ದೂರಶಿಕ್ಷಣ ನಿರ್ದೇಶನಾಲಯದ ಮೂಲಕ ನಡೆಸುತ್ತಿರುವ ಎಲ್ಲಾ ಕೋರ್ಸ್‌ಗಳನ್ನು ಮುಂದುವರಿಸಬೇಕಾದ ಅವಶ್ಯಕತೆ ಬಗೆಗೆ ಪತ್ರಮುಖೇನ ಸರ್ಕಾರ ಮತ್ತು ವಿಶ್ವವಿದ್ಯಾಲಯ ಅನುದಾನ ಆಯೋಗಕ್ಕೆ ಮನವರಿಕೆ ಮಾಡಿಕೊಟ್ಟು ಅನುಮತಿ ಪಡೆಯುವ ನಿಟ್ಟಿನಲ್ಲಿ ಸೂಕ್ತ ಕ್ರಮ ಕೈಗೊಳ್ಳಲು ಸಭೆಯು ತೀರ್ಮಾನಿಸಿತು.

ಕುಲಸಚಿವರ ವಂದನೆಗಳೊಂದಿಗೆ ಸಭೆಯು ಮುಕ್ತಾಯಗೊಂಡಿತು.

ಕುಲಸಚಿವರು
ಪದನಿಮಿತ್ತ ಕಾರ್ಯದರ್ಶಿ

ಕುಲಪತಿಗಳು
ಅಧ್ಯಕ್ಷರು